ಕರ್ನಾಟಕ ವಿಧಾನ ಪರಿಷತ್ತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	936 (1065)
ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ).
ಉತ್ತರಿಸಬೇಕಾದ ದಿನಾಂಕ	:	21.09.2021
ಉತ್ತರಿಸಬೇಕಾದ ಸಚಿವರು	:	ನಗರಾಭಿವೃದ್ಧಿ ಸಚಿವರು.

****

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಬಲ್ಲಹಳ್ಳಿ ಗ್ರಾಮದ ಸರ್ವೆ ನಂಬರುಗಳಲ್ಲಿ ಬಡಾವಣೆ ರಚನೆ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಎಷ್ಟು ಎಕರೆ ಭೂ ಪ್ರದೇಶವನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿದೆ; (ಪೂರ್ಣ ವಿವರ ನೀಡುವುದು)	ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಬಲ್ಲಹಳ್ಳಿ ಗ್ರಾಮದ ಸರ್ವೆ ನಂಬರುಗಳಲ್ಲಿ ಬಡಾವಣೆ ನಿರ್ಮಾಣಕ್ಕಾಗಿ 381 ಎಕರೆ 01ಗುಂಟೆ ವಿಸ್ತೀರ್ಣದ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ದಿನಾಂಕ: 28.06.2016 ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಿರುತ್ತದೆ.
ಆ	ಸದರಿ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಅನುಸರಿಸಿರುವ ಮಾನದಂಡಗಳೇನು; (ವಿವರ ನೀಡುವುದು)	ಭೂಸ್ವಾಧೀನ ಕಾಯ್ದೆಯಲ್ಲಿನ ಮಾನದಂಡದನ್ವಯ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಲಾಗಿದೆ.
ಇ	ಸದರಿ ಭೂಸ್ವಾಧೀನ ಪ್ರಕ್ರಿಯೆ ನಿಯಮಾವಳಿಯಂತೆ ನಿಗಧಿತ ಅವಧಿಯೊಳಗೆ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಈ	ಇದರಿಂದಾಗಿ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿರುವ ಭೂಮಾಲೀಕರು, ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಸದರಿ ಬಡಾವಣೆಯನ್ನು ಭೂಮಾಲೀಕರ ಸಹಭಾಗಿತ್ವದೊಂದಿಗೆ ಪರಸ್ಪರ ಜಂಟಿಯಾಗಿ ಅಭಿವೃದ್ಧಿ ಪಡಿಸಲು ಪ್ರಕ್ರಿಯೆ ಪ್ರಾರಂಭಿಸಿದ್ದು, ಭೂಮಾಲೀಕರೊಂದಿಗೆ ಸಮಾಲೋಚನೆ ನಡೆಸುತ್ತಿರುವುದರಿಂದ ಭೂಮಾಲೀಕರಿಗೆ ತೊಂದರೆಯಾಗಿರುವ ಬಗ್ಗೆ ಯಾವುದೇ ವರದಿಯಾಗಿರುವುದಿಲ್ಲ.
ಉ	ನಿಗಧಿತ ಸಮಯದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸದಿರಲು ಕಾರಣಗಳೇನು; (ವಿವರ ನೀಡುವುದು)	ಭೂಮಾಲೀಕರು ಪ್ರಸ್ತಾಪಿತ ಬಡಾವಣೆಯ ಅಭಿವೃದ್ಧಿಗಾಗಿ ಜಮೀನುಗಳನ್ನು ಪರಸ್ಪರ ಒಪ್ಪಂದದ ಮೂಲಕ ನೀಡಲು ಉತ್ಸುಕರಾಗಿರುವುದರಿಂದ ಭೂಮಾಲೀಕರು/ ವಾರಸುದಾರರುಗಳೊಂದಿಗೆ ಸಮಾಲೋಚನೆ ನಡೆಸಲಾಗುತ್ತಿರುವುದರಿಂದ ವಿಳಂಭವಾಗಿರುತ್ತದೆ.

ಊ	ಯಾವ ಕಾಲ ಮಿತಿಯಲ್ಲಿ ಭೂ ಮಾಲೀಕರಿಗೆ ಸೂಕ್ತ ಪರಿಹಾರ ಒದಗಿಸಲಾಗುವುದು?	ಪ್ರಸ್ತಾಪಿತ ಬಡಾವಣೆಯನ್ನು ಪ್ರಾಧಿಕಾರ ಮತ್ತು ಭೂಮಾಲೀಕರ ಜಂಟಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ. ಪ್ರಾಧಿಕಾರವು ತನ್ನ ಸ್ವಂತ ಸಂಪನ್ಮೂಲದಿಂದ ಬಡಾವಣೆಯನ್ನು ಅಭಿವೃದ್ಧಿಪಡಿಸಿದ ನಂತರ, ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪರಿಹಾರವಾಗಿ ಭೂಮಾಲೀಕರಿಗೆ ಹಸ್ತಾಂತರಿಸುವುದರಿಂದ ಭೂಮಾಲೀಕರಿಗೆ ಲಾಭದಾಯಕವಾಗಲಿದೆ.

ಸಂಖ್ಯೆ: ನಅಇ 359 ಮೈಅಪ್ರಾ 2021 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜು)
ನಗರಾಭಿವೃದ್ಧಿ ಸಚಿವರು